**ಪಿ ಡಬ್ಲು 1**

**ದಿನಾಂಕಃ** 10-10-2025

**ಪ್ರಾರಂಭ ಸಮಯಃ** 12.43

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದ,**

ಈ ಪ್ರಕರಣದಲ್ಲಿ ನಾನು ಅರ್ಜಿದಾರನಿರುತ್ತೇನೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಥಮ ವರ್ತಮಾನ ವರದಿ, ಪಿರ್ಯಾದಿ, ಘಟನಾ ಸ್ಥಳಕ್ಕೆ ಪಂಚನಾಮೆ, ವಾಹನ ಜಪ್ತು ಪಂಚನಾಮೆ, ಐ.ಎಂ.ವಿ ವರದಿ, ಗಾಯದ ಪ್ರಮಾಣ ಪತ್ರ ಮತ್ತು ಅಂತಿಮ ವರದಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 7 ಎಂದು ಗುರುತಿಸಲಾಯಿತು. ಅದೇ ರೀತಿ ಒಂದು ಡಿಸ್ಚಾರ್ಜ ಪ್ರತಿಯ ಸಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು. ಅದೇ ರೀತಿ ಒಟ್ಟು 19 ವೈದ್ಯಕೀಯ ವೆಚ್ಚದ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-9 ರಿಂದ ನಿಪಿ-27 ಎಂದು ಗುರುತಿಸಲಾಯಿತು. ಅದೇ ರೀತಿ ಒಂದು ಅಂಬ್ಯುಲೆನ್ಸ ಬಾಡಿಗೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-28 ಎಂದು ಗುರುತಿಸಲಾಯಿತು. 11 ಔಷಧಿ ಚೀಟಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-29 ಎಂದು ಗುರುತಿಸಲಾಯಿತು.

(**ಈ ಹಂತದಲ್ಲಿ ಅರ್ಜಿದಾರರ ಪರ ವಕೀಲರು ಮುಂದುವರೆದ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.**)

(**ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು**)

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಮೆಂಬರ್ ಎಡಿಶನಲ್ ಎಂಎಸಿಟಿ ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ**